**Akashvani: Bangalore**
**Regional Bulletin In Kannada**
**26.02.2026: 14.30hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**26.02.2026: 14.30hrs**

*********

**ಮುಖ್ಯಾಂಶಗಳು :**

1. ಶಿವಮೊಗ್ಗದಲ್ಲಿ ೧೦ ಕಿಲೋವ್ಯಾಟ್ ಟ್ರಾನ್ಸ್‌ಮೀಟರ್ ಲೋಕಾರ್ಪಣೆ; ಆಕಾಶವಾಣಿ, ದೂರದರ್ಶನ ಆಧುನೀಕರಣಕ್ಕೆ ಎರಡೂವರೆ ಸಾವಿರ ಕೋಟಿ ಮೀಸಲು - ಪ್ರಸಾರ ಖಾತೆ ರಾಜ್ಯ ಸಚಿವ ಡಾ. ಎಲ್. ಮುರುಗನ್
2. ಹಳೆಯ ರೈಲು ಕಾಮಗಾರಿಗಳಿಗೆ ಮರುಜೀವ ನೀಡಲು ಕೇಂದ್ರ ಸರ್ಕಾರ ಆದ್ಯತೆ - ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ
3. ಕಾರವಾರದಲ್ಲಿ ಇಂದಿನಿಂದ ೨೦೨೬ನೇ ಸಾಲಿನ ರಸ್ತೆ ಸಂಚಾರ ಸಮೀಕ್ಷೆ ಕಾರ್ಯ ಆರಂಭ
4. ರಣಜಿ ಟ್ರೋಫಿ ಫೈನಲ್; ಮೂರನೇ ದಿನದಾಟದಲ್ಲಿಂದು ಜಮ್ಮು ಕಾಶ್ಮೀರ ವಿರುದ್ಧ ಮೊದಲ ಇನ್ನಿಂಗ್ಸ್ ಆರಂಭಿಸಿರುವ ಕರ್ನಾಟಕ
5. *********

ದೇಶಾದ್ಯಂತ ಆಕಾಶವಾಣಿ ಮತ್ತು ದೂರದರ್ಶನದ ಆಧುನೀಕರಣಕ್ಕಾಗಿ ಕೇಂದ್ರ ಸರ್ಕಾರ ಸುಮಾರು ೨ ಸಾವಿರದ ೫೦೦ ಕೋಟಿ ರೂಪಾಯಿ ವೆಚ್ಚ ಮಾಡುತ್ತಿದೆ ಎಂದು ಕೇಂದ್ರ ಮಾಹಿತಿ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ. ಎಲ್. ಮುರುಗನ್ ಹೇಳಿದ್ದಾರೆ. ಶಿವಮೊಗ್ಗ ನಗರದ ವಿದ್ಯಾನಗರದಲ್ಲಿರುವ ಪ್ರಸಾರ ಭಾರತಿ ಕೇಂದ್ರದಲ್ಲಿ ನೂತನವಾಗಿ ಅಳವಡಿಸಿರುವ ೧೦ ಕಿಲೋವ್ಯಾಟ್ ಟ್ರಾನ್ಸ್‌ಮೀಟರ್‌ಅನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಈಗ ಅತ್ಯುತ್ತಮ ಧ್ವನಿ ಗುಣಮಟ್ಟಕ್ಕಾಗಿ ಡಿಜಿಟಲ್ ರೇಡಿಯೋ ವ್ಯವಸ್ಥೆಯನ್ನು ಜಾರಿಗೆ ತರಲಾಗುತ್ತಿದೆ ಎಂದು ತಿಳಿಸಿದ್ದಾರೆ. ದೇಶದ ಮೂಲೆ ಮೂಲೆಗೂ ಆಕಾಶವಾಣಿ ತಲುಪುತ್ತಿದ್ದು, ಎಲ್ಲಾ ೨೩ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮಗಳು ಪ್ರಸಾರವಾಗುತ್ತಿವೆ. ಶಿವಮೊಗ್ಗ ಆಕಾಶವಾಣಿಯ ಈ ಯೋಜನೆ ಒಂದೇ ವರ್ಷದಲ್ಲಿ ಪೂರ್ಣಗೊಂಡಿದ್ದು, ಇನ್ನೂ ಉಡುಪಿ ಮತ್ತು ಬೆಂಗಳೂರಿನಲ್ಲಿ ಆಕಾಶವಾಣಿ ವಿಸ್ತರಣಾ ಯೋಜನೆ ಶೀಘ್ರವೇ ಕೈಗೆತ್ತಿಕೊಳ್ಳಲಾಗುವುದು ಎಂದರು. ಆಕಾಶವಾಣಿ ಜನರನ್ನು ಸುಲಭವಾಗಿ ತಲುಪುವ ಮಾರ್ಗವಾಗಿರುವ ಜೊತೆಗೆ ವಿಶೇಷವಾಗಿ ವಿಪತ್ತುಗಳು

ಅಥವಾ ಇತರ ತುರ್ತು ಪರಿಸ್ಥಿತಿಗಳ ಸಂದರ್ಭದಲ್ಲಿ ಸುಲಭ, ತ್ವರಿತ, ತಪ್ಪಿಲ್ಲದ ಹಾಗೂ ನೈಜ ಸುದ್ದಿಗಳನ್ನು ತಲುಪಿಸುವ ಮಾಧ್ಯಮವಾಗಿದೆ ಎಂದು ತಿಳಿಸಿದರು. ಕೇಂದ್ರ ಸರ್ಕಾರದಿಂದ ಪ್ರಾಯೋಗಿಕ ಯೋಜನೆಯಡಿ ಶೀಘ್ರದಲ್ಲೇ ಶಿವಮೊಗ್ಗ ನಗರದ ಎಲ್ಲಾ ಉದ್ಯಾನವನಗಳಲ್ಲಿ ಆಕಾಶವಾಣಿ ಎಫ್‌ಎಂ ಸೆಟ್‌ಗಳ ವ್ಯವಸ್ಥೆ ಮಾಡಲಾಗುವುದು ಎಂದರು.

****ಧ್ವನಿ****ಮುರುಗನ್

ಸಮಾರಂಭದಲ್ಲಿ ಸಂಸದ ಬಿ.ವೈ.ರಾಘವೇಂದ್ರ ಹಾಗೂ ಶಾಸಕ ಚನ್ನಬಸಪ್ಪ, ಆಕಾಶವಾಣಿ ಮಹಾನಿರ್ದೇಶಕ ಆರ್.ಕೆ.ಜೈನ್ ಸೇರಿದಂತೆ ಹಿರಿಯ ಅಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

*********

ಕೇಂದ್ರ ಸರ್ಕಾರದ 'ವಿಕಸಿತ ಭಾರತ ೨೦೪೭' ಗುರಿ ತಲುಪುವ ನಿಟ್ಟಿನಲ್ಲಿ ರೈಲ್ವೆ ಇಲಾಖೆಯ ಹಳೆಯ ಕಾಮಗಾರಿಗಳಿಗೆ ಮರುಜೀವ ನೀಡಲಾಗುತ್ತಿದ್ದು, ಇದಕ್ಕಾಗಿ ಈಗಾಗಲೇ ೫೨ ಸಾವಿರ ಕೋಟಿ ರೂಪಾಯಿ ಅನುದಾನ ವಿನಿಯೋಗಿಸಲಾಗಿದೆ ಎಂದು ಕೇಂದ್ರ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ದಾವಣಗೆರೆ-ತುಮಕೂರು ನೇರ ರೈಲು ಮಾರ್ಗ ಯೋಜನೆ ಕಾಮಗಾರಿ ವೀಕ್ಷಣೆ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೨೦೨೬-೨೭ನೇ ಸಾಲಿನ ಕೇಂದ್ರ ಬಜೆಟ್ ದೇಶದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ರೈಲ್ವೆ ಮತ್ತು ಜಲಶಕ್ತಿ ಇಲಾಖೆಗಳು ಅಭಿವೃದ್ಧಿಯ ಪಥದಲ್ಲಿ ಸಾಗುತ್ತಿವೆ ಎಂದರು. ರೈಲ್ವೆ ಇಲಾಖೆಯಲ್ಲಿ ಬಾಕಿ ಉಳಿದಿದ್ದ ಹಳೆಯ ಯೋಜನೆಗಳ ಪೂರ್ಣಗೊಳಿಸುವಿಕೆಗೆ ಕೇಂದ್ರ ಸರ್ಕಾರ ಮೊದಲ ಆದ್ಯತೆ ನೀಡಿದೆ. ಇದಕ್ಕಾಗಿ ೫೨ ಸಾವಿರ ಕೋಟಿ ರೂಪಾಯಿ ಮೀಸಲಿಟ್ಟು, ಈಗಾಗಲೇ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಇದರ ಜೊತೆಗೆ ಪ್ರಸಕ್ತ ಸಾಲಿಗೆ ಹೆಚ್ಚುವರಿಯಾಗಿ ೭ ಸಾವಿರದ ೮೦೦ ಕೋಟಿ ರೂಪಾಯಿ ಮೊತ್ತದ ಅಭಿವೃದ್ಧಿ ಕಾರ್ಯಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಅವರು ತಿಳಿಸಿದರು. ಬೆಂಗಳೂರು-ತುಮಕೂರು-ದಾವಣಗೆರೆ, ರಾಯದುರ್ಗ-ತುಮಕೂರು ಹಾಗೂ ತಾಳಗುಪ್ಪ ಸೇರಿದಂತೆ ರಾಜ್ಯದ ವಿವಿಧ ರೈಲ್ವೆ ಯೋಜನೆಗಳನ್ನು ಚುರುಕುಗೊಳಿಸಲಾಗಿದೆ. ರೈಲ್ವೆ ನಿಲ್ದಾಣಗಳಲ್ಲಿ ಶೌಚಾಲಯ ಸೇರಿದಂತೆ ಮೂಲಸೌಕರ್ಯಗಳ ಅಭಿವೃದ್ಧಿಗೆ ವಿಶೇಷ ಒತ್ತು ನೀಡಲಾಗುತ್ತಿದೆ ಎಂದು ಸಚಿವರು ಮಾಹಿತಿ ನೀಡಿದರು.

****ಧ್ವನಿ *** ವಿ. ಸೋಮಣ್ಣ

*********

ಮನ್ರೇಗಾ ಯೋಜನೆಯ ಲೋಪದೋಷಗಳನ್ನು ಸರಿಪಡಿಸಿ ವಿಕಸಿತ ಭಾರತ ಜಿ ರಾಮ್ ಜಿ ಯೋಜನೆಯನ್ನು ಕೇಂದ್ರ ಸರ್ಕಾರ ಜಾರಿಗೆ ತಂದಿದೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ. ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಕಡಬೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ವಿಕಸಿತ ಭಾರತ ಜಿ ರಾಮ್ ಜಿ ಯೋಜನೆ ಕುರಿತು ಮಾಡಲಾಗುತ್ತಿರುವ ಅಪಪ್ರಚಾರ ಜನರು ಕಿವಿಗೊಡಬಾರದು ಎಂದರು.

ಇದಕ್ಕೂ ಮುನ್ನ ಸಚಿವರು ಕಡಬೂರಿನಲ್ಲಿ ಶಿವ, ಗಣಪತಿ ದೇವಾಲಯವನ್ನು ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ಗ್ಯಾರಂಟಿ ಯೋಜನೆ ಅನುಷ್ಠಾನದಿಂದ ಜನರಿಗೆ ತೆರಿಗೆಯ ಹೊರೆ ಹೆಚ್ಚಾಗಿದ್ದು, ರಾಜ್ಯದ ಅಭಿವೃದ್ಧಿಗೆ ಹಿನ್ನಡೆಯಾಗಿದೆ. ಉದ್ಯೋಗ ನೀಡುವುದು ರಾಜ್ಯ ಸರ್ಕಾರದ ಜವಾಬ್ದಾರಿಯಾಗಿದೆ ಎಂದು ಹೇಳಿದರು.

*********

ಲೋಕೋಪಯೋಗಿ ಇಲಾಖೆಯ ಕಾರವಾರ ವಿಭಾಗದ ವ್ಯಾಪ್ತಿಯಲ್ಲಿನ ರಾಜ್ಯ ಹೆದ್ದಾರಿಗಳು ಹಾಗೂ ಜಿಲ್ಲಾ ಮುಖ್ಯ ರಸ್ತೆಗಳ ಮೇಲೆ ಸಂಚರಿಸುವ ವಾಹನಗಳ ೨೦೨೬ನೇ ಸಾಲಿನ ರಸ್ತೆ ಸಂಚಾರ ಸಮೀಕ್ಷೆಯನ್ನು ಇಂದಿನಿಂದ ಇದೇ ೨೧ರ ಬೆಳಗ್ಗೆ ೬ ಗಂಟೆಯವರೆಗೆ ೨ ದಿನಗಳ ಕಾಲ ಕೈಗೊಳ್ಳಲಾಗಿದೆ. ಈ ಸಮೀಕ್ಷೆಗೆ ಕಾರವಾರ ವಿಭಾಗದ ಕಾರವಾರ, ಅಂಕೋಲಾ, ಕುಮಟಾ, ಹೊನ್ನಾವರ ಹಾಗೂ ಭಟ್ಕಳ ತಾಲೂಕುಗಳಲ್ಲಿ ಒಟ್ಟು ೪೩ ಸಮೀಕ್ಷಾ ಕೇಂದ್ರಗಳನ್ನು ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ಮುಖ್ಯ ರಸ್ತೆಗಳ ಮೇಲೆ ಆಳವಡಿಸಲು ಆಯ್ಕೆ ಮಾಡಲಾಗಿದೆ. ವಾಹನ ಸಂಚಾರ ಸಾಂದ್ರತೆ ಬೆಳವಣಿಗೆ ತೀವ್ರತೆಯನ್ನು ಗಮನಿಸಿ ರಸ್ತೆಗಳ ಮೇಲ್ಮೈ ಯನ್ನು ಅಭಿವೃದ್ಧಿ ಪಡಿಸುವುದು, ರಸ್ತೆಗಳನ್ನು ಅಗಲೀಕರಣ ಮಾಡುವುದು ಹಾಗೂ ರಸ್ತೆಗಳನ್ನು ಮೇಲ್ದರ್ಜೆಗೇರಿಸುವುದು ಈ ಸಮೀಕ್ಷೆಯ ಮುಖ್ಯ ಉದ್ದೇಶವಾಗಿದ್ದು, ಇದರಿಂದ ರಸ್ತೆಗಳ ಅಭಿವೃದ್ಧಿ ಕಾರ್ಯಕ್ರಮಗಳನ್ನು ಸರ್ಕಾರ ರೂಪಿಸಲು ಮತ್ತು ಕೈಗೆತ್ತಿಕೊಳ್ಳಲು ಸಹಕಾರವಾಗಲಿದೆ. ವಾಹನ ಸಂಚಾರ ವಿವರಗಳನ್ನು ಸಂಗ್ರಹಿಸಲು ಲೋಕೋಪಯೋಗಿ ಇಲಾಖೆ ಕಾರವಾರ ವಿಭಾಗದ ೫ ಉಪ ವಿಭಾಗಗಳಲ್ಲಿಯ ೪೩ ಸಮೀಕ್ಷಾ ಕೇಂದ್ರಗಳಲ್ಲಿ ಸಿ.ಸಿ ಕ್ಯಾಮರಾಗಳನ್ನು ಅಳವಡಿಸಲಾಗಿದ್ದು, ಈ ಸಂಚಾರ ಸಮೀಕ್ಷೆಯನ್ನು ಯಶ್ವಸಿಯಾಗಿ ನಡೆಸಲು ವಾಹನ ಚಾಲಕರು ಮತ್ತು ಸಾರ್ವಜನಿಕರು ಸಹಕರಿಸುವಂತೆ ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಇಂಜನೀಯರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

*********

ಸಾಹಿತ್ಯ ಮಾನವನ ಬದುಕಿಗೆ ಮಾರ್ಗದರ್ಶನ ನೀಡುತ್ತದೆ ಆದ್ದರಿಂದ ವಿದ್ಯಾರ್ಥಿಗಳು ಸಾಹಿತ್ಯದೆಡೆಗೆ ಗಮನಹರಿಸಬೇಕು ಎಂದು ಹಿರಿಯ ಸಾಹಿತಿ ಶಾಂತಿನಾಥ ದಿಬ್ಬದ ಕರೆ ನೀಡಿದ್ದಾರೆ. ಧಾರವಾಡದ ಆಲೂರು ವೆಂಕಟರಾವ್ ಸಾಂಸ್ಕೃತಿಕ ಸಭಾಭವನದಲ್ಲಿ ೧೨ನೇ ಧಾರವಾಡ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ಧಾರವಾಡ ನೆಲದಲ್ಲಿ ಸಾಹಿತ್ಯ ಸಮೃದ್ಧವಾಗಿದೆ. ಇಲ್ಲಿ ಕನ್ನಡ ಸಾಹಿತ್ಯ ಪರಂಪರೆಯನ್ನು ಸಾಹಿತಿಗಳಾದ ದ.ರಾ.ಬೇಂದ್ರೆ, ಚನ್ನವೀರ ಕಣವಿ, ಹಾಗೂ ಅನೇಕರು ಜೀವಂತವಾಗಿಟ್ಟಿದ್ದಾರೆ. ಆದರೆ ಯುವಕರು ಸಾಹಿತ್ಯದೆಡೆಗೆ ಹೆಚ್ಚು ಗಮನ ಕೊಡದಿರುವ ಸಂಗತಿ ಆತಂಕಕಾರಿ ಎಂದರು. ಇದಕ್ಕೂ ಮುನ್ನ ಸಮ್ಮೇಳನದ ಸರ್ವಾಧ್ಯಕ್ಷರಾದ ಚಂದ್ರಶೇಖರ ರೊಟ್ಟಿಗವಾಡ ಅವರ ಅದ್ದೂರಿ ಮೆರವಣಿಗೆ ವಾದ್ಯ ಮೇಳದೊಂದಿಗೆ ಅಂಜುಮನ್ ಪದವಿ ಮಹಾವಿದ್ಯಾಲಯದಿಂದ ಸಭಾಭವನದ ವರೆಗೆ ನಡೆಯಿತು. ಕಾರ್ಯಕ್ರಮದಲ್ಲಿ ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆ ಮಹಾಪೌರರಾದ ಜ್ಯೋತಿ ಪಾಟೀಲ್ ಸೇರಿದಂತೆ ಮತ್ತಿತರ ಗಣ್ಯರು ಪಾಲ್ಗೊಂಡಿದ್ದರು.

*********

ಜನಗಣತಿ ಕಾರ್ಯವು ರಾಷ್ಟ್ರದ ಅತ್ಯಂತ ಪ್ರಮುಖ ಮತ್ತು ಬೃಹತ್ ಕಾರ್ಯಕ್ರಮವಾಗಿದ್ದು, ಈ ಕಾರ್ಯಕ್ಕೆ ನಿಯೋಜಿಸಿರುವ ಜಿಲ್ಲೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಅತ್ಯಂತ ಜವಾಬ್ದಾರಿಯಿಂದ ತಮ್ಮ ಕರ್ತವ್ಯವನ್ನು ನಿರ್ವಹಿಸುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ನಿರ್ದೇಶನ ನೀಡಿದ್ದಾರೆ. ಕಾರವಾರದಲ್ಲಿ, ಜಿಲ್ಲಾ ಚಾರ್ಜ್ ಮಟ್ಟದ ಅಧಿಕಾರಿಗಳಿಗೆ ಆಯೋಜಿಸಿದ್ದ ತರಬೇತಿ ಕಾರ್ಯಗಾರ ಉದ್ಘಾಟಿಸಿ ಮಾತನಾಡಿದ ಅವರು, ಜನಗಣತಿಯ ಆಧಾರದಲ್ಲಿಯೇ ಸರ್ಕಾರಗಳು ಆಯವ್ಯಯ ಸಿದ್ದಪಡಿಸಲು, ವಸತಿ, ಮೂಲಸೌಕರ್ಯ ಸೇರಿದಂತೆ ಸಾರ್ವಜನಿಕ ಸೇವೆಗಳಿಗಾಗಿ ಹೊಸ ಕಾರ್ಯಕ್ರಮಗಳನ್ನು ಜಾರಿಗೆ ತರಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು. ಈ ಬಾರಿಯ ಜನಗಣತಿಯು ಸ್ವಾತಂತ್ರ್ಯ ನಂತರ ನಡೆಯುತ್ತಿರುವ ೮ನೇ ಹಾಗೂ ಡಿಜಿಟಲ್ ವಿಧಾನದಲ್ಲಿ ನಡೆಯುತ್ತಿರುವ ಮೊದಲ ಗಣತಿಯಾಗಿದೆ. ಸ್ಮಾರ್ಟ್ ಫೋನ್‌ಗಳ ಮೂಲಕ ನಡೆಯುವ ಈ ಜನಗಣತಿಗೆ ಪ್ರತ್ಯೇಕ ಆಪ್ ರಚಿಸಲಾಗಿದ್ದು, ಪ್ರತೀ ಮನೆಯ ಸುಮಾರು ೩೦ ಪ್ರಶ್ನೆಗಳಿಗೆ ಉತ್ತರಗಳನ್ನು ದಾಖಲಿಸಬೇಕಾಗುತ್ತದೆ. ಜನಗಣತಿಯು ೨ ಹಂತದಲ್ಲಿ ನಡೆಯಲಿದ್ದು, ಮೊದಲ ಹಂತದಲ್ಲಿ ಏಪ್ರಿಲ್ ೧ ರಿಂದ ೧೫ ರ ವರೆಗೆ ಸ್ವಯಂ ಗಣತಿಗೆ ಅವಕಾಶ ನೀಡಿದ್ದು, ಏಪ್ರಿಲ್ ೧೬ ರಿಂದ ಮೇ ೧೬ ರ ವರೆಗೆ ಮನೆ ಪಟ್ಟಿ ಕ್ಷೇತ್ರ ಕಾರ್ಯ ನಡೆಯಲಿದೆ ಎಂದರು.

*********

ಚಾಮರಾಜನಗರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಸೇರಿ ಇತರೆ ಇಲಾಖೆಗಳ ಸಹಯೋಗದೊಂದಿಗೆ ಜಿಲ್ಲಾಮಟ್ಟದ ಉದ್ಯೋಗ ಮೇಳವನ್ನು ನಾಳೆ ಬೆಳಗ್ಗೆ ೧೦ ರಿಂದ ಸಂಜೆ ೫ ಗಂಟೆಯವರೆಗೆ ಚಾಮರಾಜನಗರದ ಜೆ.ಎಚ್. ಪಟೇಲ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ.ನಂಜನಗೂಡು, ಮೈಸೂರು ಹಾಗೂ ಬೆಂಗಳೂರಿನ ಖಾಸಗಿ ಕಂಪನಿಗಳಲ್ಲಿ ಮಾರುಕಟ್ಟೆ ಸೇವೆಗಳು, ಹಣಕಾಸು ಸೇವೆಗಳು, ಇನ್ಶೂರೆನ್ಸ್ ಸೇವೆಗಳು, ಕೈಗಾರಿಕಾ ಸೇವೆಗಳು, ಬ್ಯಾಂಕಿಂಗ್ ಸೇವೆಗಳು ಮತ್ತು ಆಸ್ಪತ್ರೆ ಸೇವೆಗಳು ಹಾಗೂ ಇತರೆ ಎಲ್ಲಾ ರೀತಿಯ ಸೇವೆಗಳ ಸುಮಾರು ೭೦ ರಿಂದ ೮೦ ಕಂಪನಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಲಿವೆ. ೮ನೇ ತರಗತಿಯಿಂದ ಎಸ್.ಎಸ್.ಎಲ್.ಸಿ., ಪಿಯುಸಿ. ಎಲ್ಲಾ ಪದವಿ, ಐಟಿಐ ಹಾಗೂ ಡಿಪ್ಲೊಮಾ ಮತ್ತು ನರ್ಸಿಂಗ್ ವಿದ್ಯಾರ್ಹತೆಯುಳ್ಳ ೧೮ ರಿಂದ ೩೫ ವರ್ಷ ವಯೋಮಿತಿಯೊಳಗಿನ ಪುರುಷ ಹಾಗೂ ಮಹಿಳಾ ನಿರುದ್ಯೋಗಿ ಅಭ್ಯರ್ಥಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದು. ಜಿಲ್ಲೆಯ ಯುವಜನರು ಉದ್ಯೋಗ ಮೇಳವನ್ನು ಸದುಪಯೋಗ ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಶ್ರೀರೂಪ, ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ಮೋನಾ ರೋತ್ ಮನವಿ ಮಾಡಿದ್ದಾರೆ.

*********

ಹುಬ್ಬಳ್ಳಿಯ ಕೆಎಸಿಎ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಕರ್ನಾಟಕ ಹಾಗೂ ಜಮ್ಮು-ಕಾಶ್ಮೀರ ನಡುವಿನ ರಣಜಿ ಟ್ರೋಫಿಯ ಫೈನಲ್ ಪಂದ್ಯದ ಮೂರನೇ ದಿನವಾದ ಇಂದು ತನ್ನ ಮೊದಲನೇ ಇನ್ನಿಂಗ್ಸ್ ಆರಂಭಿಸಿರುವ ಕರ್ನಾಟಕ ೪ ವಿಕೆಟ್ ನಷ್ಟಕ್ಕೆ ೧೧೩ ರನ್ ಗಳಿಸಿ ಆಡುತ್ತಿದೆ.

*****END****